ದಿನಾಂಕ : DATE: 23/10/20
ಪತ್ರಿಕೆಯ ಹೆಸರು : NAME OF THE NEWS PAPER:

# 'ಭಾಗ್ಯಲಕ್ಷ್ಮಿ' ಮುಂದುವರಿಕೆಗೆ ಸಂಪುಟ ಅಸ್ತು

## ಎಲ್ಐಸಿ ಬದಲು ಇನ್ನು ಅಂಚೆ ಇಲಾಖೆ ನೋಡಲ್ ಏಜೆನ್ಸಿ | ಸುಕನ್ಯಾ ಸಮೃದ್ಧಿ ಯೋಜನೆಯಡಿ ಭಾಗ್ಯಲಕ್ಷ್ಮಿ ಮುಂದುವರಿಕೆ

## 1 ಲಕ್ಷ ರುಪಾಯಿ ಸಿಗಲು 18ರ ಬದಲು 21 ವರ್ಷ ಆಗಬೇಕು | 18 ವರ್ಷದ ನಂತರ 50 ಸಾವಿರ ರುಪಾಯಿ ಪಡೆಯಬಹುದು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಮಹತ್ವಾಕಾಂಕ್ಷೆ ಯೋಜನೆಯಾದ ಭಾಗ್ಯಲಕ್ಷ್ಮಿ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮ (ಎಲ್ಐಸಿ) ಬದಲು ಸುಕನ್ಯಾ ಸಮೃದ್ಧಿ ಯೋಜನೆಯಡಿ ಅಂಚೆ ಇಲಾಖೆ ಮೂಲಕ ಮುಂದುವರಿಸಲು ಸಚಿವ ಸಂಪುಟ ಸಭೆ ಮಹತ್ವದ ನಿರ್ಧಾರ ಕೈಗೊಂಡಿದೆ.



ವಿಧಾನಸೌಧದಲ್ಲಿ ಗುರುವಾರ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಿರ್ಣಯಿಸಲಾಯಿತು.

ಭಾಗ್ಯಲಕ್ಷ್ಮೀ ಯೋಜನೆಯಡಿ ಹೆಣ್ಣುಮಗುವಿಗೆ 18 ವರ್ಷ ತುಂಬಿದಾಗ 1 ಲಕ್ಷ ರು. ಲಭ್ಯವಾಗುತ್ತಿತ್ತು. ಆದರೆ, ಯೋಜನೆಯನ್ನು ಮರು ವಿನ್ಯಾಸಗೊಳಿಸಿರುವ ಕಾರಣ 21 ವರ್ಷಕ್ಕೆ ಬಾಂಡ್ ಮೆಚ್ಯೂರ್ ಆಗಲಿದೆ. 18 ವರ್ಷದ ಬಳಿಕ ಅರ್ಧ ಮೊತ್ತವನ್ನು ಪಡೆಯಲು ಫಲಾನುಭವಿ ಅರ್ಹರಾಗಿರುತ್ತಾರೆ.

ಬಾಂಡ್ ಮೆಚ್ಯೂರಿಟಿಯಾದ ಬಳಿಕ 1 ಲಕ್ಷ ರು. ಪಾವತಿ ಮಾಡಲು ಎಲ್ಐಸಿ ತಕಾರರು ಮಾಡಿತ್ತು. ಸರ್ಕಾರವು ಒಮ್ಮೆ ಪ್ರತಿ ಮಗುವಿಗೆ 19,300 ರು. ಪಾವತಿಸುತ್ತಿತ್ತು. ಬಾಂಡ್ ಮೆಚ್ಯೂರಿಟಿಯಾದ ನಂತರ 1 ಲಕ್ಷ ರು. ಎಲ್ಐಸಿ ನೀಡಬೇಕಾಗಿತ್ತು. ಆದರೆ ಸರ್ಕಾರವು ಒಂದು ಮಗುವಿಗೆ 30 ಸಾವಿರ ರು. ಪಾವತಿಸಬೇಕು. ಇಲ್ಲದಿದ್ದರೆ 1 ಲಕ್ಷ ರು. ನೀಡಲು ಸಾಧ್ಯವಾಗಿಲ್ಲ ಎಂದು ಎಲ್ಐಸಿ ತಿಳಿಸಿತ್ತು. ಹೀಗಾಗಿ ಭಾಗ್ಯಲಕ್ಷ್ಮೀ ಯೋಜನೆ ಯನ್ನು ಸುಕನ್ಯಾ ಸಮೃದ್ಧಿ ಯೋಜನೆಗೆ ವರ್ಗಾಯಿಸಲಾಗಿದೆ. ಸುಕನ್ಯಾ ಸಮೃದ್ಧಿ ಯೋಜನೆಯಡಿ ರಾಜ್ಯ ಸರ್ಕಾರವು ಪ್ರತಿ ಮಗುವಿಗೆ ವರ್ಷಕ್ಕೆ 3 ಸಾವಿರ ರು. ನಂತೆ 15 ವರ್ಷಗಳ ಕಾಲ ಪಾವತಿಸಲಿದೆ. 21 ವರ್ಷವಾದಾಗ 1.27 ಲಕ್ಷ ಮುಕ್ತಾಯ ಹಣ ಬರಲಿದೆ.

## ಸಚಿವ ಸಂಪುಟ ಸಭೆಯ ತೀರ್ಮಾನಗಳು

- ಕರ್ನಾಟಕ ಭೂ ಸುಧಾರಣೆಗಳ (2ನೇ ತಿದ್ದುಪಡಿ) ವಿಧೇಯಕಕ್ಕೆ ಅನುಮೋದನೆ
- ಬಹುಗ್ರಾಮ ಯೋಜನೆಯಡಿ 127 ಜನವಸತಿಗಳಿಗೆ ಕುಡಿವ ನೀರು ಯೋಜನೆಯ ಪರಿಷ್ಕೃತ ಮೊತ್ತ 91.50 ಕೋಟಿ ರು.ಗೆ ಅನುಮೋದನೆ
- 3 ವೇಸ್ಟ್ ಫ್ರೆಂಚ್ ಕಂಪನಿಗೆ ಬಿಬಿಎಂಪಿ ವ್ಯಾಪ್ತಿಯ ಚಿಕ್ಕನಾಗಮಂಗಲದಲ್ಲಿ 500 ಮೆಟ್ರಿಕ್ ಟನ್ ಘನತ್ಯಾಜದಿಂದ ವಿದ್ಯುತ್ ಉತ್ಪಾದಿಸುವ ಘಟಕ ಸ್ಥಾಪಿಸಲು ನೀಡಿದ ಆದೇಶವನ್ನು ಹಿಂಪಡೆಯಲು ತೀರ್ಮಾನ
- ಬಾಗಲಕೋಟೆ ಜಿಲ್ಲೆಯ ಮುಧೋಳ ಪಟ್ಟಣಕ್ಕೆ ಬೈಪಾಸ್ ರಸ್ತೆ ನಿರ್ಮಿಸಲು ಕಾಮಗಾರಿಯ 109.81 ಕೋಟಿ ರು. ಪರಿಷ್ಕೃತ ಅಂದಾಜಿಗೆ ಒಪ್ಪಿಗೆ
- ಮುಧೋಳ ತಾಲೂಕಿನ ತಿಮ್ಮಾಪುರದ ರನ್ನನಗರದಲ್ಲಿನ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತವನ್ನು 40 ವರ್ಷಗಳ ಅವಧಿಗೆ ಎಲ್ಆರ್ಒಟಿ ಆಧಾರದ ಮೇಲೆ ಖಾಸಗಿಗೆ ಗುತ್ತಿಗೆ ನೀಡಲು ಅನುಮತಿ
- ಪಶ್ಚಿಮ ವಾಹಿನಿ ಯೋಜನೆಯಡಿಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಬಿಳಿಯೂರು ಗ್ರಾಮ ಎಂಬಲ್ಲಿ ಕಿಂಡಿ ಅಣೆಕಟ್ಟು ರಚನೆ ಕಾಮಗಾರಿಯ 46.70 ಕೋಟಿ ರು. ಪರಿಷ್ಕೃತ ಅಂದಾಜಿಗೆ ಅನುಮೋದನೆ

## ಕನಿಷ್ಠ ಬೆಂಬಲ ಬೆಲೆ ಅಡಿ ಭತ್ತ ಖರೀದಿ

**ಬೆಂಗಳೂರು:** ರಾಜ್ಯದಲ್ಲಿ 2020-21ನೇ ಸಾಲಿನಲ್ಲಿ ಕನಿಷ್ಠ ಬೆಂಬಲ ಬೆಲೆ ಬೆಲೆ ಯೋಜನೆಯಡಿ ಪ್ರತಿ ರೈತರಿಂದ ಎಕರೆಗೆ 16 ಕ್ವಿಂಟಾಲ್‌ನಂತೆ ಗರಿಷ್ಠ 40 ಕ್ವಿಂಟಾಲ್ ಭತ್ತವನ್ನು ಖರೀದಿಸಲು ಗುರುವಾರ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಅಧ್ಯಕ್ಷತೆಯಲ್ಲಿ ನಡೆದ ಬೆಂಬಲ ಬೆಲೆ ನಿಗದಿ ಕುರಿತ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ. ಅಲ್ಲದೆ, ಖರೀದಿ ಏಜೆನ್ಸಿಯಾಗಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯನ್ನು ಕೈಬಿಟ್ಟು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿಗೆ ವಹಿಸಲು ನಿರ್ಧಾರ ಮಾಡಲಾಗಿದೆ.